<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.14/2023</u>

ದಿಃ 19.01.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-7 Pw-4

| | | |
|---|---|---|
| ಹೆಸರು | ಃ | ಅರುಣ |
| ತಂದೆಯ ಹೆಸರು | ಃ | ಫ್ರಾಂಚೀಸ್ |
| ವಯಸ್ಸು | ಃ | 32 ವರ್ಷ |
| ಉದ್ಯೋಗ | ಃ | ಕೂಲಿ ಕೆಲಸ |
| ವಾಸಸ್ಥಳ | ಃ | ಟ್ರೂಪ್‌ಲೈನ್, ರಾಮನಗರ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ಈಗ ಸುಮಾರು 1 ವರ್ಷದ ಹಿಂದೆ ಒಂದು ದಿನ ಮಧ್ಯಾಹ್ನ 3.30-4.00 ಗಂಟೆ ಸಮಯದಲ್ಲಿ ನಾನು ಕೆಲಸ ಮುಗಿಸಿಕೊಂಡು ನಮ್ಮ ಮನೆಯ ಕಡೆಗೆ ಹೋಗುತ್ತಿದ್ದಾಗ, ಚಾಸಾ.1 ಇವಳು ದಾರಿಯಲ್ಲಿ ನನ್ನನ್ನು ಕರೆದುಕೊಂಡು ರಾಮನಗರ ಶಹರ್ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿದ್ದ, ಒಂದು ದಸ್ತಾವೇಜಿನ ಮೇಲೆ ನನ್ನ ಸಹಿಯನ್ನು ಮಾಡಿಸಿರುತ್ತಾಳೆ.

2. ಸದರಿ ದಸ್ತಾವೇಜನ್ನು ಈಗ ನೋಡಿ ಗುರುತಿಸುತ್ತಿದ್ದು, ಅದನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು, ಅದರ

ಮೇಲಿರುವ ನನ್ನ ಸಹಿಯನ್ನು ಈಗ ನಿ.ಪಿ.2(ಬಿ) ಎಂದು ಗುರುತಿಸಲಾಯಿತು.

3. ನಿ.ಪಿ.2ರಲ್ಲಿ ಏನು ಬರೆದಿದೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

4. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಸ್ಥಳ ಪಂಚನಾಮೆಯನ್ನು ಮಾಡಿರುವುದಿಲ್ಲ.

5. ಅದೇ ಸಮಯದಲ್ಲಿ ಫಿಲ್ಲೇಚೆರಿ ಕೆಲಸ ಮಾಡುವ ಜಾಗದ ಹತ್ತಿರ ಪೊಲೀಸರು ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿದ್ದು, ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದು, ಅವುಗಳನ್ನು ಈಗಾಗಲೇ ಕ್ರಮವಾಗಿ ನಿ.ಪಿ.3 ಮತ್ತು 4 ಎಂದು ಗುರುತಿಸಿದ್ದು ಇರುತ್ತವೆ.

6. ಸದರಿ ನಿ.ಪಿ.3 ಮತ್ತು 4ಗಳನ್ನು ಪೊಲೀಸರು ಯಾವ ಕಾರಣಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

7. ಪೊಲೀಸರು ಠಾಣೆಯಲ್ಲಿ ಸುಮಾರು 2-3 ದಾಖಲಾತಿಗಳ ಮೇಲೆ ನನ್ನ ಸಹಿಗಳನ್ನು ಪಡೆದಿರುತ್ತಾರೆ.

8. ನನಗೆ ಸಹಿ ಮಾಡುವುದನ್ನು ಬಿಟ್ಟರೆ ಕನ್ನಡ ಓದಲು ಮತ್ತು ಬರೆಯಲು ಬರುವುದಿಲ್ಲ.

9. ಈಗ ನನಗೆ ಓದಿ ಹೇಳಿದ ನಿ.ಪಿ.2 ರಂತೆ ದಿಃ06.07.2020 ರಂದು ಬೆಳಿಗ್ಗೆ 10.30 ರಿಂದ 11.15 ರವರೆಗೆ ಪೊಲೀಸರು ನನಗೆ ಸ್ಥಳಕ್ಕೆ ಕರೆದೊಯ್ದು ಒಂದು ಸ್ಥಳ ಪಂಚನಾಮೆಯನ್ನು ಮಾಡಿ, ಆ ಸಮಯದಲ್ಲಿ ನಿ.ಪಿ.3 ಮತ್ತು 4 ರಂತೆ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ ಎಂಬುದು ಸರಿ.

10. ಸ್ಥಳದಲ್ಲಿ ಪೊಲೀಸರು ಪರಿಶೀಲನೆ ಮಾಡಿ, ಅಳತೆಯನ್ನೂ ಸಹ ಮಾಡಿ, ಬರೆದುಕೊಂಡು ನಂತರ ಅದರ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ ಎನ್ನುವುದು ಸರಿ.

11. ಆ ಸಮಯದಲ್ಲಿ ನನ್ನ ಜೊತೆಗೆ ಚಾಸಾ.1 ಮತ್ತು 8 ಇಬ್ಬರೂ ಇದ್ದರು ಎನ್ನುವುದು ಸರಿ.

12. ಈಗ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿತರ ವಿರುದ್ದ ಚಾಸಾ.1 ಇವಳು ಒಂದು ಪಿರ್ಯಾದನ್ನು ಸಲ್ಲಿಸಿದ್ದು, ಆ

ವಿಚಾರವಾಗಿ ಪೊಲೀಸರು ಸದರಿ ಪಂಚನಾಮೆಯನ್ನು ಮಾಡಿರುತ್ತಾರೆ ಎನ್ನುವುದು ಸರಿ.

ಪಾಟೀ ಸವಾಲುಃ ಶ್ರೀ. ವಿ.ಎಸ್.ಎಸ್., ವಕೀಲರಿಂದ ಆರೋಪಿಗಳ ಪರವಾಗಿಃ ಆರೋಪಿ ಪರ ವಕೀಲರು ಕೂಗಿಸಲಾಯಿತು. ಗೈರು ಹಾಜರಿರುತ್ತಾರೆ. ಯಾವುದೇ ಸಕಾರಣವಿಲ್ಲದ್ದರಿಂದ ಮತ್ತು ವಿನೋದ್ ಕುಮಾರ್ ವರ್ಸಸ್ ಸ್ಟೇಟ್ ಆಫ್ ಪಂಜಾಬ್ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯ ವಿಚಾರಣೆ ಮತ್ತು ಪಾಟೀ ಸವಾಲುಗಳನ್ನು ಒಂದೇ ದಿನದಂದು ಮಾಡಬೇಕೆಂದು ನಿರ್ದೇಶನವಿರುವುದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.